ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	719
ಸದಸ್ಯರ ಹೆಸರು	:	ಶ್ರೀ ಅಲ್ಲಂ ವೀರಭದ್ರಪ್ಪ (ವಿಧಾನಸಭೆಯಿಂದ ಚುನಾಯಿತರಾದವರು)
ಉತ್ತರಿಸುವ ದಿನಾಂಕ	:	12.03.2020
ಉತ್ತರಿಸುವ ಸಚಿವರು	:	ಮಾನ್ಯ ಜಲಸಂಪನ್ಮೂಲ ಸಚಿವರು

ಕ್ರ ಸಂ.	ಪ್ರಶ್ನೆ	ಉತ್ತರಗಳು
ಅ)	ಪ್ರತಿ ವರ್ಷದಂತೆ ತುಂಗಭದ್ರಾ ಜಲಾಶಯದಲ್ಲಿ ಮಳೆಗಾಲದಲ್ಲಿ ನೀರು ತುಂಬಿ ಹರಿಯುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಬಂದಿದೆ.
ಆ)	ಈಗಾಗಲೇ ಸದರಿ ಜಲಾಶಯದಲ್ಲಿ ಹೆಚ್ಚಿನ ನೀರು ಹರಿದು ಹೋಗುವುದನ್ನು ತಡೆದು ಸಂಗ್ರಹಿಸಲು ಪರ್ಯಾಯ ಜಲಾಶಯ ವ್ಯವಸ್ಥೆಯನ್ನು ನವಲಿ ಗ್ರಾಮದ ಹತ್ತಿರ ಮಾಡಲು ಉದ್ದೇಶಿಸಲಾಗಿದೆಯೇ;	ತುಂಗಭದ್ರಾ ಜಲಾಶಯದಲ್ಲಿ ತುಂಬಿರುವ ಹೂಳಿನಿಂದಾಗಿ ನಷ್ಟವಾಗಿರುವ ನೀರಿನ ಕೊರತೆಯನ್ನು ನೀಗಿಸುವ ಸಲುವಾಗಿ, ಕೊಪ್ಪಳ ಜಿಲ್ಲೆಯ ನವಲಿ ಗ್ರಾಮದ ಹತ್ತಿರ ಸಮನಾಂತರ ಜಲಾಶಯ ನಿರ್ಮಿಸಲು ಉದ್ದೇಶಿಸಲಾಗಿದೆ.
ಇ)	ಹಾಗಿದ್ದಲ್ಲಿ, ಇದಕ್ಕಾಗಿ ಈ ವರ್ಷದ ಆಯವ್ಯಯದಲ್ಲಿ ಅನುದಾನವನ್ನು ಒದಗಿಸಲಾಗುವುದೇ?	2020-21 ರ ಆಯವ್ಯಯದಲ್ಲಿ, ತುಂಗಭದ್ರಾ ಜಲಾಶಯದ ನೀರಿನ ಸಂಗ್ರಹಣಾ ಸಾಮರ್ಥ್ಯದ ಕೊರತೆಯನ್ನು ನೀಗಿಸಲು ಪರ್ಯಾಯ ಹರಿವು ನಾಲೆ ಮೂಲಕ ನವಲಿ ಹತ್ತಿರ ಸಮತೋಲನ ಜಲಾಶಯ ನಿರ್ಮಿಸುವ ಯೋಜನೆಯ ವಿಸ್ತೃತ ಯೋಜನಾ ವರದಿಯನ್ನು ತಯಾರಿಸಲು ರೂ20.00 ಕೋಟಿಗಳ ಅನುದಾನವನ್ನು ಒದಗಿಸುವ ಬಗ್ಗೆ, ಘೋಷಣೆಯಾಗಿರುತ್ತದೆ.

ಸಂಖ್ಯೆ:ಜಸಂಇ 22 ಎಂಎಲ್‌ಎ 2020

(ರಮೇಶ್ ಲ. ಜಾರಕಿಹೊಳಿ)
ಜಲಸಂಪನ್ಮೂಲ ಸಚಿವರು